ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ತೋಟಗಾರಿಕೆ ಇಲಾಖೆ ಯೋಜನೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

174(81) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸರ್ಕಾರವು ಯಾವ ಯಾವ ಬೆಳೆಗಳನ್ನು ತೋಟಗಾರಿಕಾ ಬೆಳೆಗಳೆಂದು ಪರಿಗಣಿಸಿದೆ ; ಹಾಸನ ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆ ಉತ್ಪಾದಿಸುವ ಪ್ರದೇಶದ ವಿಸ್ತೀರ್ಣವೆಷ್ಟು ; ಈ ಪ್ರದೇಶಗಳಲ್ಲಿ ಯಾವ ಯಾವ ಬೆಳೆಗಳನ್ನು ಎಷ್ಟು ಪ್ರಮಾಣದಲ್ಲಿ ಉತ್ಪಾದಿಸಲಾಗುತ್ತಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ 3 ವರ್ಷಗಳಲ್ಲಿ ತೋಟಗಾರಿಕಾ ಇಲಾಖೆಯಿಂದ ರೈತರ ಅನುಕೂಲಕ್ಕಾಗಿ ರೂಪಿಸಿರುವ ಯೋಜನೆಗಳು ಯಾವುವು ; ಈ ಯೋಜನೆಗಳಿಗಾಗಿ ಹಾಸನ ಜಿಲ್ಲೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಖರ್ಚಾದ ಅನುದಾನವೆಷ್ಟು ; ಈ ಯೋಜನೆಗಳ ಫಲಾನುಭವಿಗಳ ವಿವರಗಳೊಂದಿಗೆ ಯೋಜನೆವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ರೈತರು ಬೆಳೆಯುತ್ತಿರುವ ತೋಟಗಾರಿಕಾ ಬೆಳೆಗಳ ಸಂರಕ್ಷಣೆಗಾಗಿ ಹಾಸನ ಜಿಲ್ಲೆಯಲ್ಲಿ ಶೀತಲೀಕರಣ ಸಂಗ್ರಹಾಗಾರಗಳ ನಿರ್ಮಾಣ ಮಾಡಲಾಗಿದೆಯೇ ; (ವಿವರ ನೀಡುವುದು)

(ಈ) ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ತೋಟಗಾರಿಕೆ ಇಲಾಖೆಯಿಂದ ಎಷ್ಟು ಕೃಷಿ ಹೊಂಡಗಳನ್ನು ನಿರ್ಮಾಣ ಮಾಡಲಾಗಿದೆ ; ಇದಕ್ಕಾಗಿ ಫಲಾನುಭವಿಗಳಿಗೆ ವಿತರಿಸಿರುವ ಅನುದಾನವೆಷ್ಟು ಮತ್ತು ಫಲಾನುಭವಿಗಳ ವಿವರಗಳೇನು ? (ತಾಲ್ಲೂಕುವಾರು ಮಾಹಿತಿ ನೀಡುವುದು)